# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | | 494 (503 ) |
| ಸದಸ್ಯರ ಹೆಸರು | | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಹಾಗೂ<br>ಶ್ರೀ ಎಸ್.ಎಲ್. ಭೋಜೇಗೌಡ |
| ಉತ್ತರಿಸಬೇಕಾದ ದಿನಾಂಕ | | 13-12-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಮಂತ್ರಿಗಳು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; | 2018-19ನೇ ಸಾಲಿಗೆ ರಾಜ್ಯದ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ: 12,642 |
| ಆ) | ಸುಮಾರು 10-15 ವರ್ಷಗಳ ಕಾಲ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದವರ ವಯೋಮಿತಿ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ |
| ಇ) | ಹಾಗಿದ್ದಲ್ಲಿ ವಯೋಮಿತಿ ಮೀರಿದ ಮತ್ತು ಮೀರುತ್ತಿರುವ ಅತಿಥಿ ಉಪನ್ಯಾಸಕರಿಗೆ "ಸೇವಾ ಭದ್ರತೆ" ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಆಯಾ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ಬಯಸುವ ಎಲ್ಲಾ ವಿಧ್ಯಾರ್ಥಿಗಳಿಗೆ ಪ್ರವೇಶ ನೀಡುವುದರಿಂದ ಉಂಟಾಗುವ ಬೋಧನಾ ಕಾರ್ಯಭಾರದಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಮಾತ್ರ ಸೀಮಿತಗೊಳಿಸಿ ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.<br><br>ಆದ್ದರಿಂದ ಅವರುಗಳ ಸೇವಾ ಭದ್ರತೆಯನ್ನು ಒದಗಿಸಲು, ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಈ) | ಇವರಿಗೆ ನೀಡುತ್ತಿರುವ ವೇತನ ಎಷ್ಟು; ವೇತನ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಿನಾಂಕ:04/04/2017ರ ಸರ್ಕಾರದ ಆದೇಶ ಸಂ: ಇಡಿ/66/ಡಿಸಿಇ/2017ರನ್ವಯ ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಟ ಶೇ.55ರಷ್ಟು ಅಂಕಗಳನ್ನು ಪಡೆದು ಎನ್.ಇ.ಟಿ/ಎಸ್.ಎಲ್.ಇ.ಟಿ/ ಪಿಹೆಚ್.ಡಿ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ ಗೌರವಧನ ರೂ.13,000/- ಹಾಗೂ ಇತರೆ ಅತಿಥಿ ಉಪನ್ಯಾಸಕರಿಗೆ ಮಾಸಿಕ ಗೌರವಧನ ರೂ.11,000/-ಗಳನ್ನು ನಿಗದಿ ಪಡಿಸಲಾಗಿದೆ.<br><br>ಪ್ರತಿ ವರ್ಷ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ವಿಧ್ಯಾರ್ಥಿಗಳ ಪ್ರವೇಶಾತಿ ನಂತರ ಬೋಧನಾ ಕಾರ್ಯಭಾರದ ಮಾಹಿತಿ ಲಭ್ಯವಾಗುತ್ತಿದ್ದು, ಸದರಿ ಕಾರ್ಯಭಾರವನ್ನು ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರು ಅನುಮೋದಿಸಿದ ನಂತರ ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿ ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರದಲ್ಲಿ ಕಲಾ/ವಾಣಿಜ್ಯ ವಿಭಾಗಕ್ಕೆ ಅತಿಥಿ ಉಪನ್ಯಾಸಕರಿಗೆ ವಾರದಲ್ಲಿ 08 ಗಂಟೆ ಹಾಗೂ ವಿಜ್ಞಾನ ವಿಷಯದಲ್ಲಿ ವಾರದಲ್ಲಿ 10 ಗಂಟೆ ಯಂತೆ ವಿಷಯವಾರು ಒಟ್ಟು ಲಭ್ಯವಾಗುವ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರಿಂದ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಿ ಅರ್ಹತಾ ಪಟ್ಟಿ |

| | | |
|---|---|---|
| | | ತಯಾರಿಸಿ ಸಂಬಂಧಪಟ್ಟ ಜಂಟಿ ನಿರ್ದೇಶಕರಿಂದ ಅನುಮೋದನೆ ಪಡೆದು ವೇತನ ಪಾವತಿಸುತ್ತಿರುವುದರಿಂದ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ವಿಳಂಬವಾಗುತ್ತಿರುವ ಸರ್ಕಾರದ ಗಮನಕ್ಕೆ ತಂದಿದೆ. ಹಾಗೂ ಅತಿಥಿ ಉಪನ್ಯಾಸಕರ ವೇತನವನ್ನು ಖಜಾನೆ-2ರ ಮುಖಾಂತರ ಸೆಳೆಯುತ್ತಿದ್ದು ಹಲವು ಕಾಲೇಜುಗಳಲ್ಲಿ ಪ್ರಾಂಶುಪಾಲರ ಬದಲಾವಣೆಯಿಂದಾಗಿ ಡಿ.ಎಸ್.ಸಿ ಕೀಗಳನ್ನು ಪಡೆಯಲು ವಿಳಂಬವಾದ ಕಾರಣ ವೇತನ ಪಾವತಿಸುವಲ್ಲಿ ವಿಳಂಬವಾಗಿರುತ್ತದೆ. ಹಾಗೂ ಕೆಲವು ಬಾರಿ ಅಗತ್ಯ ಆಯವ್ಯಯದ ಕೊರತೆಯಿಂದ ಈ ಸಮಸ್ಯೆಯನ್ನು ಬಗೆಹರಿಸಲು ತಂತ್ರಾಂಶವನ್ನು ರೂಪಿಸಲು ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಉ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಲ್ಲಿ ದಿನಗೂಲಿ ಮತ್ತು ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸಿದ ನೌಕರರನ್ನು ಖಾಯಂ ಮತ್ತು ವಿಲೀನಗೊಳಿಸಿರುವಂತೆ ಅತಿಥಿ ಉಪನ್ಯಾಸಕರನ್ನೂ ಸಹ ಖಾಯಂಗೊಳಿಸಲು ಅಥವಾ ವಿಲೀನಗೊಳಿಸಲು ಸರ್ಕಾರ ಮುಂದಾಗುವುದೇ; | ಅತಿಥಿ ಉಪನ್ಯಾಸಕರನ್ನು ಆಯಾ ಶೈಕ್ಷಣಿಕ ವರ್ಷಗಳಲ್ಲಿ ಲಭ್ಯವಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಮಾತ್ರ ಸೀಮಿತಗೊಳಿಸಿ ನೇಮಕ ಮಾಡಿಕೊಳ್ಳುತ್ತಿದ್ದು, ಹಾಗೂ ಕಾಲೇಜುಗಳಲ್ಲಿ ಬೋಧಕರನ್ನು ಯು.ಜಿ.ಸಿ. ನಿಗದಿಪಡಿಸಿದ ಮಾನದಂಡಗಳನ್ವಯ ನೇಮಕ ಮಾಡಿಕೊಳ್ಳಬೇಕಾಗಿರುವುದರಿಂದ ನಿಯಮಗಳಲ್ಲಿ ಅವಕಾಶವಿಲ್ಲ. |
| ಊ) | ಅತಿಥಿ ಉಪನ್ಯಾಸಕರುಗಳಿಗೆ ನೀಡುವ ಮಾಸಿಕ ಗೌರವಧನ ಅಥವಾ ಗೌರವಭತ್ಯೆಯನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಹೆಚ್ಚಿಸಲಾಗುವುದು? | ಸರ್ಕಾರದ ಪರಿಶೀಲನೆಯಲ್ಲಿದೆ. ಅನುದಾನದ ಲಭ್ಯತೆ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಕ್ರಮವಹಿಸಲಾಗುವುದು. |

(ಶ್ರೀ ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 313 ಡಿಸಿಇ 2018